ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆಃ ಕಾಶಿಇ/ಶೈವಿ/04/ಸುತ್ತೋಲೆ/2022-23

ದಿನಾಂಕ: 06.07.2022

# ಸುತ್ತೋಲೆ

ವಿಷಯ: "ವಿಶ್ವ ಯುವ ಕೌಶಲ್ಯ" ದಿನಾಚರಣೆಯ ಅಂಗವಾಗಿ ಡಿಪ್ಲೊಮಾ ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸುವ ಕುರಿತು.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಕೌಉಜೀಇ/ 55 /ಕೌಗುಇ/ 2022 ದಿನಾಂಕ:27.06.2022.

* * * * * *

"ವಿಶ್ವ ಯುವ ಕೌಶಲ್ಯ" ದಿನಾಚರಣೆಯ ಅಂಗವಾಗಿ ದಿನಾಂಕ:15.07.2022 ರಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ಕೌಶಲ್ಯದ ಅವಶ್ಯಕತೆ ಹಾಗೂ ಪ್ರಾಮುಖ್ಯತೆಯ ಕುರಿತಂತೆ ಜಾಗೃತಿ ಮೂಡಿಸುವ, ಪ್ರೋತ್ಸಾಹ ನೀಡುವ ಮತ್ತು ವ್ಯಾಪಕ ಪ್ರಚಾರ ನಡೆಸುವ ನಿಟ್ಟಿನಲ್ಲಿ ಈ ಕೆಳಕಂಡ ವಿಷಯಗಳ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲಾಗಿರುತ್ತದೆ.

ಅ) ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ವಿಷಯ ಶೀರ್ಷಿಕೆ:-

1. ಕೈಗಾರಿಕೆ - ಶೈಕ್ಷಣಿಕ ಒಗ್ಗೂಡಿಕೆಯಿಂದ ಕೌಶಲ್ಯದ ಅಂತರವನ್ನು ಕಡಿಮೆ ಮಾಡುವುದು (Industry Academia Convergence "Bridging the Skill Gap")
2. ಶಕ್ತಿಯುತ ಹಾಗೂ ಸುಸ್ಥಿರ ಬೆಳವಣಿಗೆಗಾಗಿ ಕೌಶಲ್ಯಯುತ ಮಾನವ ಸಂಪನ್ಮೂಲವನ್ನು ಸೃಷ್ಟಿಸುವ ಮಾರ್ಗಗಳು (Ways to create skilled workforce for strong and sustainable growth)
3. ಕೌಶಲ್ಯ ಮತ್ತು ಸಾಮರ್ಥ್ಯಗಳ ಮೇಲೆ ಕೇಂದ್ರೀಕೃತವಾದ ಉನ್ನತ ಶಿಕ್ಷಣದ ಬಗ್ಗೆ ಮರುಚಿಂತನೆ (Rethinking Higher Education, Focussing on skills and competencies)

ಆ) ಭಾಗವಹಿಸುವ ವಿದ್ಯಾರ್ಥಿಗಳು https://www/kaushalkar.com/app/skill-competition ಲಿಂಕ್‌ನಡಿ ನೋಂದಾಯಿಸಲು ಹಾಗೂ ಮೇಲೆ ನಮೂದಿಸಿರುವ ಯಾವುದಾದರೂ ಒಂದು ವಿಷಯದ ಕುರಿತು ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಪ್ರಬಂಧ ಬರೆದು (1000 - 1200 ಪದಗಳಿಗೆ ಮೀರದಂತೆ) ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

7/7/22

ಇ) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10.07.2022.

ಈ) 1. ರಾಜ್ಯ ಮಟ್ಟದ ವಿಜೇತ ವಿದ್ಯಾರ್ಥಿಗಳಿಗೆ :
ಪ್ರಥಮ ಬಹುಮಾನ : ರೂ.15,000/-
ದ್ವಿತೀಯ ಬಹುಮಾನ : ರೂ.10,000/-
ತೃತೀಯ ಬಹುಮಾನ : ರೂ.5,000/- ನಗದು ಪುರಸ್ಕಾರ ನೀಡಲಾಗುವುದು.

2. ಜಿಲ್ಲಾ ಮಟ್ಟದ ವಿಜೇತ ವಿದ್ಯಾರ್ಥಿಗಳಿಗೆ:

ಪ್ರತಿ ಜಿಲ್ಲೆಯ ವಿಜೇತ ವಿದ್ಯಾರ್ಥಿಗಳಿಗೆ ಆಯಾ ಜಿಲ್ಲೆಗಳ "ಜಿಲ್ಲಾಧಿಕಾರಿಗಳೊಂದಿಗೆ ಒಂದು ದಿನ" ಕಾರ್ಯಕ್ರಮದಡಿ ಜಿಲ್ಲಾಧಿಕಾರಿಗಳೊಂದಿಗೆ ಇದ್ದು, ಅವರ ಎಲ್ಲ ಕಾರ್ಯ ಚಟುವಟಿಕೆಗಳಲ್ಲಿ ಭಾಗಿಯಾಗುವ ಅವಕಾಶ ಕಲ್ಪಿಸಲಾಗಿದೆ.

ತತ್ಸಂಬಂಧವಾಗಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಸ್ನಾತಕೋತ್ತರ ವಿದ್ಯಾರ್ಥಿಗಳು ಮೇಲ್ಕಂಡ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಲು ಪ್ರಾಂಶುಪಾಲರುಗಳು ವೈಯುಕ್ತಿಕ ಗಮನ ಹರಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1) ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
3) ಆಯುಕ್ತರ, ನಿರ್ದೇಶಕರ, ಮುಖ್ಯ ಆಡಾಳಿತಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ ಆಪ್ತಶಾಖೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.
4) ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಶಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೊಠಡಿ ಸಂಖ್ಯೆ: 347, 2ನೇ ಹಂತ, 3ನೇ ಮಹಡಿ, ಬಹುಮಹಡಿ ಕಟ್ಟಡ, ಡಾ ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
2) ಕಛೇರಿ ಪ್ರತಿ.